**Akashvani : Bangalore**
**Regional Bulletin In Kannada**
**18.09.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**18.09.2025 / 2.30 pm**

**<><*<><>*><>**

<u>ಮುಖ್ಯಾಂಶಗಳು</u>

1. ಬಾನು ಮುಷ್ತಾ ಕ್ ದಸರಾ ಉದ್ಘಾಟನೆ ವಿಚಾರ - ನಾಳೆ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ವಿಚಾರಣೆ
2. ಬೆಂಗಳೂರಿನ ರಸ್ತೆ ಗುಂಡಿಯಿಂದ ಜನಜೀವನ ಅಸ್ತವ್ಯಸ್ತ - ಸರ್ಕಾರದ ವಿರುದ್ಧ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಅಸಮಾಧಾನ
3. ಕಲಬುರಗಿಯ ಅಳಂದಾ ಕ್ಷೇತ್ರದಲ್ಲೂ ಮತಗಳ್ಳತನ; ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪ
4. ರಾಜ್ಯದ ಕರಾವಳಿ ಸೇರಿದಂತೆ ಹಲವೆಡೆ ಧಾರಾಕಾರ ಮಳೆ; ಹವಾಮಾನ ಇಲಾಖೆ ಮುನ್ಸೂಚನೆ

***********

ಬಿಜೆಪಿಯ ಮಾಜಿ ಸಂಸದ ಪ್ರತಾಪ್ ಸಿಂಹ ಮತ್ತು ಇತರ ಇಬ್ಬರು ಸಲ್ಲಿಸಿದ್ದ ಮೂರು ಅರ್ಜಿಗಳನ್ನು ಹೈಕೋರ್ಟ್ ವಜಾಗೊಳಿಸಿರುವುದನ್ನು ಪ್ರಶ್ನಿಸಿ ವಿಶೇಷ ರಜೆ ಅರ್ಜಿಯನ್ನು ನಾಳೆ ಪಟ್ಟಿ ಮಾಡಲು ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಒಪ್ಪಿಗೆ ಸೂಚಿಸಿದ್ದಾರೆ. ಸೆಪ್ಟೆಂಬರ್ ೧೫ ರಂದು ನೀಡಿದ ತನ್ನ ತೀರ್ಪಿನಲ್ಲಿ, ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ. ಜೋಶಿ ಪೀಠವು ಯಾವುದೇ ಹಕ್ಕುಗಳನ್ನು ಉಲ್ಲಂಘಿಸಲಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

***********

ನಾಡಪ್ರಭು ಕೆಂಪೇಗೌಡರು ಕಟ್ಟಿದ ಹೆಮ್ಮೆಯ ಬೆಂಗಳೂರು ನಗರದ ಪ್ರತಿಷ್ಠೆಗೆ ಘೋರ ಪೆಟ್ಟು ಬಿದ್ದಿದೆ ಎಂದು ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ರಸ್ತೆ ಗುಂಡಿಗಳಿಂದ ಕಂಪನಿಗಳು ವಲಸೆ ಹೋಗುವ ವಿಚಾರವಾಗಿ ಸಾಮಾಜಿಕ ಜಾಲ ತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಬೆಂಗಳೂರು ಈಗ ಗುಂಡಿಯೂರು ಆಗುತ್ತಿರುವುದು ದುರ್ದೈವ ಎಂದಿದ್ದಾರೆ. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಇಬ್ಬರು ಈ ಅಪಮಾನಕ್ಕೆ ಹೊಣೆಗಾರರು. ಹೆಜ್ಜೆ ಹೆಜ್ಜೆಗೂ ಸಾವಿನ ಗುಂಡಿ, ಕಂಡೆಲ್ಲೆಲ್ಲ ಕಸದ ರಾಶಿ, ಗ್ರೇಟರ್ ಬೆಂಗಳೂರು ಎಂದರೆ ಇದೇನಾ? ಜಿಬಿಎ ಏನು ಮಾಡುತ್ತಿದೆ? ಎಂದು ಪ್ರಶ್ನಿಸಿದ್ದಾರೆ. ಚುನಾವಣಾ ಗ್ಯಾರಂಟಿಗಳಿಗೆ ರಾಜ್ಯದ ಅಭಿವೃದ್ಧಿ ಬಲಿಯಾಗಿ ಗ್ರೇಟರ್ ಬೆಂಗಳೂರು ಗಬ್ಬೆದ್ದು ನಾರುತ್ತಿದೆ ಎಂದು ದೂರಿದ್ದಾರೆ. ರಾಜ್ಯ ಸರ್ಕಾರದ ದುರಾಡಳಿತದಿಂದಾಗಿ ರಾಜ್ಯ ರಾಜಧಾನಿ ಗುಂಡಿಮಯವಾಗಿದೆ. ಈ ಗುಂಡಿಮಯ ರಸ್ತೆಗಳು ಬೆಂಗಳೂರು ನಗರ ವಾಸಿಗಳ ಜೀವನವನ್ನು ನರಕವಾಗಿಸಿದೆ, ಗುಂಡಿ ಸಾಮ್ರಾಜ್ಯವನ್ನು ನೋಡಿ ಬೇಸತ್ತಿರುವ ಕೈಗಾರಿಕೆಗಳು ಇದೀಗ ಬೆಂಗಳೂರು ತೊರೆಯಲು ತೀರ್ಮಾನಿಸಿರುವುದು ಆತಂಕಕಾರಿ ವಿಷಯ ಎಂದು ಬಿಜೆಪಿ ತಿಳಿಸಿದೆ.

***********

ಗ್ರೇಟರ್ ಬೆಂಗಳೂರಿನ ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಜಲಮಂಡಳಿ, ಬೆಸ್ಕಾಂ, ಕೆಪಿಟಿಸಿಎಲ್ ಸೇರಿದಂತೆ ಯಾವುದೇ ಇಲಾಖೆಗೆ ರಸ್ತೆ ಅಗೆತಕ್ಕೆ ಅನುಮತಿ ನೀಡದಂತೆ ಹಾಗೂ ಪ್ರಸ್ತುತ ನಡೆಯುತ್ತಿರುವ ಎಲ್ಲಾ ರಸ್ತೆ ಅಗೆತ ಕಾಮಗಾರಿಗಳನ್ನು ಸ್ಥಗಿತಗೊಳಿಸುವಂತೆ ಆಯುಕ್ತ ರಾಜೇಂದ್ರ ಚೋಳನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಇಂದು ಬೆಳಿಗ್ಗೆ ವಿವಿಧ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ವೇಳೆ ಮಾತನಾಡಿದ ಅವರು, ರಸ್ತೆ ಅಗೆಯುವುದರಿಂದ ವಾಹನಗಳ ಸಂಚಾರಕ್ಕೂ ಸಾಕಷ್ಟು ಸಮಸ್ಯೆ ಆಗುತ್ತಿದೆ ಎಂದು ತಿಳಿಸಿದ್ದಾರೆ. ದುರಸ್ಥಿ ಕಾರ್ಯ ಪೂರ್ಣಗೊಂಡ ಬಳಿಕ ಪ್ರಗತಿಯಲ್ಲಿರುವ ಕಾಮಗಾರಿ ಹಾಗೂ ಹೊಸದಾಗಿ ರಸ್ತೆ ಅಗೆಯಲು ಅನುಮತಿ ನೀಡಲು ಸೂಚನೆ ನೀಡಿದ್ದಾರೆ. ಸಂಪಿಂಗೆ ರಸ್ತೆ, ಶೇಷಾದ್ರಿ ರಸ್ತೆ, ಶಿವಾನಂದ ವೃತ್ತ, ಹಾಗೂ ಸುತ್ತಮುತ್ತಲಿನ ರಸ್ತೆಗಳು ಸೇರಿದಂತೆ ಸುಮಾರು ೬ ಕಿ.ಮೀ ಉದ್ದದ ರಸ್ತೆಗಳಲ್ಲಿ ಪರಿಶೀಲನೆ ನಡೆಸಿದ ಅವರು, ಮೇಲ್ಮೈ ಪದರ ದುರಸ್ತಿ ಹಾಗೂ ರಸ್ತೆ ಗುಂಡಿಗಳನ್ನು ತ್ವರಿತ ಗತಿಯಲ್ಲಿ ಮುಚ್ಚಬೇಕು ಎಂದು ನಿರ್ದೇಶನ ನೀಡಿದ್ದಾರೆ.

***********

ಕಲಬುರಗಿಯ ಆಳಂದ ಕ್ಷೇತ್ರದಲ್ಲೂ ಮತಗಳ್ಳತನ ನಡೆದಿದೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ, ರಾಹುಲ್ ಗಾಂಧಿ ಆರೋಪಿಸಿದ್ದಾರೆ. ನವದಹೆಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ವಿರೋಧಪಕ್ಷಕ್ಕೆ ಮತಹಾಕುವವರ ಹೆಸರುಗಳನ್ನೇ ಮತದಾರರ ಪಟ್ಟಿಯಿಂದ ಅಳಿಸಲಾಗಿದೆ ಎಂದು ದೂರಿದ್ದಾರೆ. ಆಳಂದದಲ್ಲಿ ೬ ಸಾವಿರದ ೧೮ ಜನರ ಹೆಸರುಗಳನ್ನು ಡಿಲೀಟ್ ಮಾಡಲಾಗಿದ್ದು ಎಲ್ಲಾ ಹೆಸರುಗಳನ್ನು ಕರ್ನಾಟಕದ ಮೊಬೈಲ್ ಸಂಖ್ಯೆಯಿಂದಲೇ ಅಳಿಸಲಾಗಿದೆ ಎಂದು ಹೇಳಿದ್ದಾರೆ. ಕರ್ನಾಟಕದ ಸಿಐಡಿ ೧೮ ಭಾರಿ ಪತ್ರ ಬರೆದರೂ, ಚುನಾವಣಾ ಆಯೋಗ ಮಾಹಿತಿ ನೀಡಿಲ್ಲ ಎಂದು ತಿಳಿಸಿದ್ದಾರೆ. ರಾಹುಲ್ ಗಾಂಧಿ ಈ ಹಿಂದೆ ಮಹದೇವಪುರ ಕ್ಷೇತ್ರದಲ್ಲಿ ಕೂಡ ಮತಗಳ್ಳತನವಾಗಿದ್ದ ಬಗ್ಗೆ ಆರೋಪ ಮಾಡಿದ್ದರು.

***********

ರಾಜ್ಯದಲ್ಲಿ ೨ನೇ ಅತಿದೊಡ್ಡ ಸಮುದಾಯವಾಗಿರುವ ಒಕ್ಕಲಿಗ ಸಮುದಾಯಕ್ಕೆ ಮೀಸಲಾತಿಯಲ್ಲಿ ಅನ್ಯಾಯವಾಗಿದ್ದು, ಇದನ್ನು ಸರಿಪಡಿಸಬೇಕಾದರೆ ಇದೇ ೨೨ರಿಂದ ಆರಂಭವಾಗಲಿರುವ ಜಾತಿ ಜನಗಣತಿಯಲ್ಲಿ ಕಡ್ಡಾಯವಾಗಿ ಒಕ್ಕಲಿಗ ಎಂದು ನಮೂದಿಸಬೇಕೆಂದು ಆದಿಚುಂಚನಗಿರಿ ಪೀಠಾಧ್ಯಕ್ಷ ನಿರ್ಮಲಾನಂದನಾಥ ಸ್ವಾಮೀಜಿ, ಸ್ಪಟಿಕಪುರಿ ಸಂಸ್ಥಾನದ ಪೀಠಾಧ್ಯಕ್ಷ ನಂಜಾವಧೂತ ಸ್ವಾಮೀಜಿ, ಕೆಂಗೇರಿಯ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ನಿಶ್ಚಲಾನಂದನಾಥ ಸ್ವಾಮೀಜಿ ಕರೆ ನೀಡಿದ್ದಾರೆ. ಒಕ್ಕಲಿಗ ಸಮುದಾಯದ ಜಾಗೃತಿ ಸಭೆಯಲ್ಲಿ ಮಾತನಾಡಿದ ಅವರು, ಒಕ್ಕಲಿಗರು ಯಾರೂ ಮತಾಂತರವಾಗಿಲ್ಲ. ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಸಮುದಾಯಕ್ಕೆ ನ್ಯಾಯ ಸಿಗಬೇಕಾದರೆ ಜಾತಿ ಗಣತಿ ಸಮೀಕ್ಷೆ ಸಂದರ್ಭ ಜಾತಿ ಕಲಂನಲ್ಲಿ '೧೫೪೧ ವಿಒಕೆಕೆ' ಎಂದು ಹಾಗೂ ಉಪಜಾತಿಯಲ್ಲೂ ಒಕ್ಕಲಿಗ ಎಂದು ನಮೂದಿಸಬೇಕೆಂದು ತಿಳಿಸಿದ್ದಾರೆ.

***********

ಬೆಂಗಳೂರು ದಕ್ಷಿಣ ಜಿಲ್ಲೆಯ ೧೨೬ ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛತೆಯ ಸೇವೆ ಎಂಬ ಅಭಿಯಾ ನಡೆಯಿತು. ಸಾರ್ವಜನಿಕ ಸ್ಥಳಗಳು, ಬ್ಲಾಕ್ ಸ್ಪಾಟ್‌ಗಳು, ನೀರಿನ ಮೂಲಗಳಾದ ಕೆರೆಕಟೆ, ಕಲ್ಯಾಣಿ, ನೀರಿನ ಟ್ಯಾಂಕ್ ಹಾಗೂ ದನಗಳು ಕುಡಿಯುವ

ನೀರಿನ ತೊಟ್ಟಿಗಳನ್ನು ಎಲ್ಲಾ ಗ್ರಾಮ ಪಂಚಾಯಿತಿ ಸಿಬ್ಬಂದಿ ಹಾಗೂ ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಸ್ವಚ್ಛಗೊಳಿಸಿದರು. ಸಾರ್ವಜನಿಕರಿಗೆ ಅರಿವು ಮೂಡಿಸಲು ಸೈಕಲ್ ಜಾಥಾ, ಮ್ಯಾರಥಾನ್ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆಯ ೧೫೪ ಗ್ರಾಮ ಪಂಚಾಯಿತಿಗಳಲ್ಲಿ ಅಕ್ಟೋಬರ್ ೨ ರವರೆಗೆ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಗ್ರಾಮಗಳಲ್ಲಿ  ಸ್ವಚ್ಛ,ತೆ, ನೈರ್ಮಲ್ಯ ಕಾಪಾಡಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ  ಡಾ. ಪ್ರವೀಣ್ ಪಿ ಬಾಗೇವಾಡಿ ತಿಳಿಸಿದ್ದಾರೆ. ಕೋಲಾರ ಜಿಲ್ಲೆ ಮುಳಬಾಗಿಲು ತಾಲೂಕಿನ ಉತ್ತನೂರು ಗ್ರಾಮ ಪಂಚಾಯಿತಿಯಲ್ಲಿ ಆಯೋಜಿಸಿದ್ದ ಸ್ವಚ್ಛತಾ ಹಿ ಸೇವಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಗ್ರಾಮಗಳಲ್ಲಿರುವ ದೇವಾಲಯಗಳು, ಕಲ್ಯಾಣಿಗಳ ಸ್ವಚ್ಛತೆ  ಹಾಗೂ ಉತ್ತಮ ಆರೋಗ್ಯಕರ ಪರಿಸರ ನಿರ್ಮಾಣ ಮಾಡುವ ಮೂಲಕ ಸ್ವಚ್ಛ ಸುಂದರ ಗ್ರಾಮಗಳೆಂದು ಘೋಷಿಸಬೇಕು ಎಂದು ಸಮುದಾಯಕ್ಕೆ ಕರೆ ನೀಡಿದರು. ಇದೇ ವೇಳೆ ಉತ್ತನೂರು ಗ್ರಾಮದ ಶ್ರೀ ವರದರಾಜ ಸ್ವಾಮಿ ದೇವಸ್ಥಾನದ ಕಲ್ಯಾಣಿಯನ್ನು ಸ್ವಚ್ಛತೆಗೊಳಿಸಲು ಅವರು ಚಾಲನೆ ನೀಡಿದರು. ಸೇವಾ ಪಾಕ್ಷಿಕದ ಅಂಗವಾಗಿ ದಾವಣಗೆರೆ ರೈಲು ನಿಲ್ದಾಣದಲ್ಲಿಂದು ಸ್ವಚ್ಛತಾ ಅಭಿಯಾನ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ನೈರುತ್ಯ ರೈಲ್ವೆ ವಲಯದ ಸಹಾಯಕ ಅಭಿಯಂತರ ಲೋಕೇಶ್ವರಪ್ಪ, ಕಸ ವಿಲೇವಾರಿ ಮತ್ತು ಸ್ವಚ್ಛತೆ ಕೇವಲ ಇಲಾಖೆಗಳಿಗೆ ಸಂಬಂಧಿಸಿದ್ದಲ್ಲ, ಇದರಲ್ಲಿ ಸಂಘ ಸಂಸ್ಥೆಗಳು, ಸಾರ್ವಜನಿಕರೂ ಭಾಗವಹಿಸಿದರೆ ಮಾತ್ರ ಸ್ವಚ್ಛತಾ ಸೇವಾ ಅಭಿಯಾನ ಸಾರ್ಥಕವಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

***********

ಕರ್ನಾಟಕ ರಾಜ್ಯ ವಾಯುಮಾಲಿನ್ಯ ನಿಯಂತ್ರಣ ಮಂಡಳಿ ರಾಮನಗರ ವಿಭಾಗ ಹಾಗೂ ಸರ್ಕಾರಿ ಕಾನೂನು ಕಾಲೇಜಿನ ಎನ್.ಎಸ್.ಎಸ್ ಸಹಯೋಗದೊಂದಿಗೆ ವಿಶ್ವ ಓಝೋನ್ ದಿನಾಚರಣೆ ಆಚರಿಸಲಾಯಿತು. ರಾಜ್ಯ ವಾಯುಮಾಲಿನ್ಯ ನಿಯಂತ್ರಣ ಮಂಡಳಿ ರಾಮನಗರ ವಿಭಾಗದ ಪರಿಸರ ಅಧಿಕಾರಿ ಮಂಜುನಾಥ್ ಕಾರ್ಯಕ್ರಮವನ್ನು ಉದ್ಘಾಟಿಸಿದರು.

***********

ರಾಜ್ಯದ ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಕ್ರಿಯವಾಗಿತ್ತು. ಕರಾವಳಿ ಕರ್ನಾಟಕದಲ್ಲಿ ಸಾಮಾನ್ಯವಾಗಿತ್ತು. ಇಂದು ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಬಳ್ಳಾರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ಮೈಸೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕ ಡಾ.ಸಿ.ಎಸ್.ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

**ಧ್ವನಿ : ಡಾ.ಸಿ.ಎಸ್.ಪಾಟೀಲ್, ( 31 ಸೆಕೆಂಡುಗಳು)**

***********